ಸರಕಾರಿ ಗೋಚರಾವು ಭೂ ಅಕ್ರಮಣದ ಬಗ್ಗೆ

೪೪೮. ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ).— ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಹಲವಾರು ಕಡೆಗಳಲ್ಲಿ ಇರತಕ್ಕ ಸರ್ಕಾರಿ ಗೋಚರಾವು ಭೂ ಅಕ್ರಮಣ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಭೂ ಅತಿಕ್ರಮಣ ತಡೆಗಟ್ಟಲು ತೆಗೆದುಕೊಂಡ ಕ್ರಮಗಳೇನು ?

ಶ್ರೀ ಕೆ. ಹೆಚ್. ಪಾಟೀಲ್ (ಕಂದಾಯ ಮಂತ್ರಿಗಳು).—

ಅ) ಹೌದು.

ಆ) ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವುದಕ್ಕೆ ಕರ್ನಾಟಕ ಭೂ ಕಂದಾಯ ಕಾಯಿದೆ ೧೯೬೪ರ ಕಲಂ ೧೯ ರಂತೆ ಟಿ.ಟಿ. ದಂಡವನ್ನು ವಿಧಿಸಲಾಗುತ್ತಿದೆ. ಸರ್ಕಾರವು ಈ ಬಗ್ಗೆ ನಿರ್ಧಾರವನ್ನು ತೆಗೆದುಕೊಂಡ ನಂತರ ಇಂತಹ ಅನಧಿಕೃತ ಸಾಗುವಳಿಗಳನ್ನು ಸಕ್ರಮಗೊಳಿಸುವ ಬಗ್ಗೆ ಅಥವಾ ವಕ್ಕಲೆಬ್ಬಿಸುವ ಮತ್ತು ಕಠಿಣ ಕ್ರಮ ಕೈಗೊಳ್ಳುವ ಬಗ್ಗೆ ಶೀರ್ಮಾನ ಕೈಗೊಳ್ಳಲಾಗುವುದು.

ದಾವಣಗೆರೆ ಮಹಾನಗರದಲ್ಲಿ ಪೋಲೀಸ್ ಸಿಬ್ಬಂದಿ ಕೊರತೆ ಬಗ್ಗೆ

೪೪೯. ಶ್ರೀ ವೈ. ಎಂ. ವೀರಣ್ಣ (ದಾವಣಗೆರೆ).— ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಾವಣಗೆರೆ ಮಹಾನಗರದಲ್ಲಿ ಪೋಲೀಸ್ ಸಿಬ್ಬಂದಿ ವರ್ಗದ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ;

ಆ) ದಾವಣಗೆರೆಯಲ್ಲಿ ಟ್ರಾಫಿಕ್ ಸರ್ಕಲ್ ನಿರ್ಮಿಸುವ ವಿಚಾರ ಸರ್ಕಾರದವರ ಪರಿಶೀಲನೆಯಲ್ಲಿದೆಯೇ ;

ಇ) ದಾವಣಗೆರೆ ಅಡಿಷನಲ್ ಪೋಲೀಸ್ ಸೂಪರಿಂಟಿಂಡೆಂಟ್ ಹುದ್ದೆ ರಚಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ತೆಗೆದುಕೊಳ್ಳಲಿರುವ ಕ್ರಮಗಳೇನು ?

ಶ್ರೀ. ವೀರೇಂದ್ರ ಪಾಟೀಲ್ (ಮುಖ್ಯ ಮಂತ್ರಿಗಳು).—

ಅ) ಇಲ್ಲ.

ಆ) ಇಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ದಾವಣಗೆರೆಯನ್ನು ಜಿಲ್ಲಾ ಕೇಂದ್ರವಾಗಿ ಪರಿವರ್ತಿಸುವ ಬಗ್ಗೆ

೪೫೦. ಶ್ರೀ ವೈ. ಎಂ. ವೀರಣ್ಣ (ದಾವಣಗೆರೆ).— ಮಾನ್ಯ ಕಂದಾಯ ಮತ್ತು ಕಾರ್ಮಿಕ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಾವಣಗೆರೆಯನ್ನು ಜಿಲ್ಲಾ ಕೇಂದ್ರವಾಗಿ ಪರಿವರ್ತಿಸಬೇಕೆಂದು ಮನವಿಗಳು ಸರ್ಕಾರಕ್ಕೆ ಬಂದಿವೆಯೇ ;

ಆ) ದಾವಣಗೆರೆ ತಾಲ್ಲೂಕು ಕಛೇರಿಯಲ್ಲಿ ಕೆಲಸದ ಒತ್ತಡ ಹೆಚ್ಚುತ್ತಿರುವುದರಿಂದ ಹೆಚ್ಚುವರಿ ತಹಶೀಲ್ದಾರರನ್ನು ನೇಮಿಸಬೇಕೆಂಬ ಮನವಿಗಳು ಸರ್ಕಾರಕ್ಕೆ ಬಂದಿವೆಯೇ ;

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ?